ಇ) ಬೆಂಗಳೂರು ನಗರದಲ್ಲಿ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳಿಗೆ ಒಟ್ಟು 2691 ವಸತಿ ಗೃಹಗಳನ್ನು ಕಟ್ಟಲಾಗಿದ್ದು ಎಲ್ಲಾ ಅರ್ಜಿದಾರರಿಗೂ ಜೇಷ್ಠತೆಯ ಆಧಾರದ ಮೇಲೆ ವಸತಿ ಗೃಹಗಳು ಖಾಲಿ ಆದ ಹಾಗೆ ಹಂಚಲಾಗುವುದು.

ಈ) ಅಂತಹ ಯಾವುದೇ ಪ್ರಸ್ತಾಪ ಸದ್ಯಕ್ಕೆ ಇರುವುದಿಲ್ಲ.

ವಕ್ಫ್ ಮಂಡಳಿಯಿಂದ ಹೆಣ್ಣು ಮಕ್ಕಳಿಗೆ ವಿದ್ಯಾರ್ಥಿ ವೇತನ.

1691 (2383) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ವಕ್ಫ್ ಮಂಡಳಿಯು ಹೆಣ್ಣು ಮಕ್ಕಳ ವಾಸ್ಯಂಗಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ನೀಡಿದ ವಿದ್ಯಾರ್ಥಿ ವೇತನವೆಷ್ಟು;

ಆ) ಬಿಡುಗಡೆ ಮಾಡಲ್ಪಟ್ಟ ವಿದ್ಯಾರ್ಥಿವೇತನ ಹೆಣ್ಣು ಮಕ್ಕಳಿಗೆ ತಲುಪದೆ, ಹಣ ಲ್ಯಾಪ್ಸ್ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ, ವಿದ್ಯಾರ್ಥಿ ವೇತನ ವಿತರಣೆ ಮಾಡದಿರುವವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎ.ಎಂ.ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು).

ಅ) ಯಾವುದೂ ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಹುಬ್ಬಳ್ಳಿ - ಧಾರವಾಡ ಬೈಪಾಸ್ ರಸ್ತೆ ಬಗ್ಗೆ

1692 (2384) ಶ್ರೀ.ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು;

ಆ) ಸದರಿ ಬೈಪಾಸ್ ರಸ್ತೆಯಲ್ಲಿನ ಹುಬ್ಬಳ್ಳಿ-ಗಿಳಿಯಾಲ ರಸ್ತೆಗೆ ಅಂಡರ್‌ಬ್ರಿಡ್ಜ್ ಕಟ್ಟುವುದು ಅತ್ಯಂತ ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ) ಬಂದಿದ್ದಲ್ಲಿ, ಅಂಡರ್‌ಬ್ರಿಡ್ಜ್ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಧರಮ್‌ಸಿಂಗ್ (ಲೋಕೋಪಯೋಗಿ ಸಚಿವರು).

ಅ) 2000ನೇ ಇಸವಿ ಅಂತ್ಯದಲ್ಲಿ ಪೂರ್ಣಗೊಳಿಸಲಾಗುವುದು.

ಆ) ಸರ್ಕಾರದ ಗಮನಕ್ಕೆ ಬಂದಿದೆ.

ಇ) ಅಂಡರ್‌ಬ್ರಿಡ್ಜ್ ನಿರ್ಮಾಣ ಮಾಡಲು ಸರ್ಕಾರವು ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆಯನ್ನು ನಿರ್ಮಾಣ, ನಿರ್ವಹಣೆ ಹಾಗೂ ಹಸ್ತಾಂತರ (ಬಿಒಟಿ) ಆಧಾರದ ಮೇರೆಗೆ ನಿರ್ಮಿಸುತ್ತಿರುವ ನಂದಿ ಹೈವೆ ಡೆವಲಪರ್ಸ್ ಕಂಪನಿಗೆ ಸೂಚಿಸಿದೆ. ಸದರಿ ಕಾಮಗಾರಿಯು ಮುಕ್ತಾಯದ ಹಂತದಲ್ಲಿದೆ.

ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವುದರ ಬಗ್ಗೆ

1693 (2188) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1999-2000ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಪಶುಸಂಗೋಪನಾ ಆಸ್ಪತ್ರೆಗಳಾಗಿ ಮೇಲ್ದರ್ಜೆಗೆ ಏರಿಸಲಾಗಿದೆ; (ವಿಧಾನ ಸಭಾವಾರು ಮಾಹಿತಿ ಒದಗಿಸುವುದು)

ಆ) ಮೇಲ್ದರ್ಜೆಗೆ ಸೇರಿಸಿದ ಎಲ್ಲಾ ಆಸ್ಪತ್ರೆಗಳು ಕಾರ್ಯನಿರ್ವಹಣೆ ಆರಂಭಿಸಿದೆಯೆ;

ಇ) 2000-2001ನೇ ಸಾಲಿನಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು;

ಈ) ಕುಂದಾಪುರ ವಿಧಾನ ಸಭೆಯ ಯಾವ ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು?

ಶ್ರೀ ಎ.ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ) ಯಾವುದೂ ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಪಟ್ಟಣ ಮತ್ತು ಪುರಸಭೆ ವ್ಯಾಪ್ತಿಯ ರಸ್ತೆಗಳ ಕಾಂಕ್ರೀಟೀಕರಣ

1694 (2189) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1999-2000ನೇ ಸಾಲಿನಲ್ಲಿ ಎಷ್ಟು ಪಟ್ಟಣ ಪ್ರದೇಶಗಳಲ್ಲಿ ಎಷ್ಟು ಪ್ರಮಾಣದ ರಸ್ತೆಗಳನ್ನು ಕಾಂಕ್ರೀಟೀಕರಣಗೊಳಿಸಲಾಗಿದೆ;

ಆ) ಇನ್ನು ಎಷ್ಟು ಪಟ್ಟಣಗಳಲ್ಲಿ ನಗರ ಸಭೆ, ಪುರಸಭೆ ವ್ಯಾಪ್ತಿ ಸೇರಿ ರಸ್ತೆಗಳನ್ನು ಕಾಂಕ್ರೀಟೀಕರಣಗೊಳಿಸಲಾಗುವುದು;

ಇ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭಾ ವ್ಯಾಪ್ತಿಯ ಲೋಕೋಪಯೋಗಿ ಇಲಾಖೆಗೆ ಸೇರಿದ 1.6 ಕಿ.ಮೀ.ಉದ್ದದ ರಸ್ತೆಯನ್ನು ಕಾಂಕ್ರೀಟೀಕರಣಗೊಳಿಸುವ ಉದ್ದೇಶವಿದೆಯೆ; ಇದ್ದಲ್ಲಿ ಯಾವಾಗ ಕಾಂಕ್ರೀಟೀಕರಣಗೊಳಿಸಲಾಗುವುದು?